ಶ್ರೀ ವಿಶ್ವೇಶ್ವರ ಹೆಗೆಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

(ಅ) ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಗಮನಕ್ಕೆ ಬಂದಿದೆ. ಆದರೆ ಮಾದಕ ದ್ರವ್ಯಗಳ ಮಾರಾಟದ ಬಗ್ಗೆ ದೂರುಗಳು ಇರುವುದಿಲ್ಲ.

(ಆ) ವಿದ್ಯಾರ್ಥಿಗಳು ಮಾದಕ ದ್ರವ್ಯಗಳಿಗೆ ಒಳಗಾಗದಂತೆ ಜಾಗೃತಿ ಮತ್ತು ಅರಿವು ಮೂಡಿಸಲು ಕ್ರಮಕೈಗೊಳ್ಳಲಾಗಿದೆ.

(ಇ) ಹೌದು, ರಾಜ್ಯ ಉಚ್ಚ ನ್ಯಾಯಾಲಯದ ದಿನಾಂಕ 14–11–2009ರ ತೀರ್ಪಿನಂತೆ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾರ್ಯವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಸಂಬಂಧ" ಶಾಲಾ/ಕಾಲೇಜುಗಳ ಆವರಣದಿಂದ 100 ಗಜಗಳ ಅಂತರದಲ್ಲಿ ತಂಬಾಕುಯುಕ್ತ ವಸ್ತುಗಳ ಮಾರಾಟ ನಿಷೇಧಿಸಿದೆ ಎಂದು ರಾಜ್ಯದ ಎಲ್ಲಾ ಶಾಲಾ/ಕಾಲೇಜುಗಳ ಆವರಣದಲ್ಲಿ ಪ್ರದರ್ಶನ ಫಲಕಗಳನ್ನು (Display Board) ಪ್ರದರ್ಶಿಸುವಂತೆ ಸುತ್ತೋಲೆ ಹೊರಡಿಸಲಾಗಿದೆ. ಈ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮತ್ತು ಅರಿವು ಮೂಡಿಸಲು ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಲು ದಿನಾಂಕ 15–11–2010 ಮತ್ತು 15–02–2011 ರಲ್ಲಿ ಸುತ್ತೋಲೆ ಹೊರಡಿಸಿ ಅಗತ್ಯ ಕ್ರಮ ವಹಿಸಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಸೂಚನೆ ನೀಡಲಾಗಿರುತ್ತದೆ.

ಬೆಂಗಳೂರು ನಗರದಲ್ಲಿ ಪ್ರತಿ ಕಾಲೇಜಿನಲ್ಲಿ ಪ್ರಾಂಶುಪಾಲರ ಮಾರ್ಗ ದರ್ಶನದಲ್ಲಿ ಹಿರಿಯ ಉಪನ್ಯಾಸಕರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿದೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತಂಬಾಕು ಮಾರಾಟ ನಿಷೇದ ಕ್ರಮ ಕೈಗೊಂಡಿದೆ.

ರಾಜ್ಯದ ಇತರ ನಗರಗಳಲ್ಲಿ ತಂಬಾಕು ಮಾರಾಟ ನಿಷೇಧಿಸಲು ನಗರ ಸಭೆಗಳು ಕ್ರಮ ಕೈಗೊಂಡಿದೆ. ಪ್ರತಿ ಕಾಲೇಜು ತಂಬಾಕು ಮಾರಾಟ ನಿಷೇಧ ಫಲಕವನ್ನು ಹಾಕಿವೆ.

ಪಶು ವೈದ್ಯಕೀಯ ಆಸ್ಪತ್ರೆ ಪ್ರಾರಂಭ

269 (546) **ಶ್ರೀ ಪ್ರತಾಪ ಗೌಡ ಪಾಟೀಲ್** (ಮಸ್ಕಿ):– ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸದಾಗಿ ಪಶುವೈದ್ಯಕೀಯ ಆಸ್ಪತ್ರೆಗಳನ್ನು ಪ್ರಾರಂಭಿಸುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಇದ್ದಲ್ಲಿ, ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗುವುದು? (ಮಾಹಿತಿ ನೀಡುವುದು)

ಶ್ರೀ ರೇವು ನಾಯಕ್ ಬೆಳಮಗಿ (ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನ ಸಚಿವರು):–

(ಅ) ರಾಜ್ಯದಲ್ಲಿ ಹೊಸದಾಗಿ ಪಶುವೈದ್ಯಕೀಯ ಆಸ್ಪತ್ರೆಗಳನ್ನು ಪ್ರಾರಂಭಿಸುವ ವಿಚಾರ ಸದ್ಯಕ್ಕೆ ಸರ್ಕಾರದ ಮುಂದಿರುವುದಿಲ್ಲ.

2007ರ ಜಾನುವಾರು ಗಣತಿಯ ಪ್ರಕಾರ ರಾಜ್ಯದಲ್ಲಿ 1,70,28,417 ಜಾನುವಾರು ಘಟಕಗಳಿದ್ದು ಅದಕ್ಕನುಗುಣವಾಗಿ ಪ್ರತಿ 5,000 ಜಾನುವಾರು ಘಟಕಗಳಿಗೆ ಒಂದರಂತೆ ಕೃಷಿ ಆಯೋಗದ ಶಿಫಾರಸ್ಸಿನನ್ವಯ 3,395 ಪಶುವೈದ್ಯಕೀಯ ಸಂಸ್ಥೆಗಳ ಅವಶ್ಯಕತೆ ಇರುತ್ತದೆ. ರಾಜ್ಯದಲ್ಲಿ ಪ್ರಸ್ತುತ ಒಟ್ಟು 4,110 ವಿವಿಧ ಹಂತದ ಪಶುವೈದ್ಯಕೀಯ ಸಂಸ್ಥೆಗಳಿದ್ದು ಅವಶ್ಯಕತೆಗಿಂತ 715 ಸಂಸ್ಥೆಗಳು ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿವೆ.

ರಾಜ್ಯದಲ್ಲಿ ಹಾಲಿ 637 ಪಶುವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇದ್ದು, ಪಶುವೈದ್ಯಕೀಯ ಸಂಸ್ಥೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಸದ್ಯಕ್ಕೆ ಪರಿಗಣಿಸಿರುವುದಿಲ್ಲ.

(ಆ) ಉದ್ಭವಿಸುವುದಿಲ್ಲ

ಉಪನ್ಯಾಸಕರು ಮತ್ತು ಸಿಬ್ಬಂದಿ ಕೊರತೆ

198 (556) **ಶ್ರೀ ಬಾಲಕೃಷ್ಣ ಹೆಚ್. ಸಿ. (ಮಾಗಡಿ):–** ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾಗಡಿ ಪಟ್ಟಣದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಾದರೆ, ಈ ಕಾಲೇಜಿನಲ್ಲಿ ಯಾವ್ಯಾವ ಸಂಯೋಜನೆಗಳಿರುತ್ತವೆ; ಎಷ್ಟು ಸಿಬ್ಬಂದಿಯ ಮಂಜೂರಾತಿಯಾಗಿರುತ್ತೆ; ಎಷ್ಟು ಸಿಬ್ಬಂದಿಯನ್ನು ಈ ಕಾಲೇಜಿಗೆ ನಿಯೋಜಿಸಲಾಗಿರುತ್ತದೆ (ವಿವರ ನೀಡುವುದು);

(ಇ) ಖಾಲಿ ಇರುವ ಉಪನ್ಯಾಸಕರು ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)